Akashvani : Bangalore
Regional Bulletin In Kannada
ಆಕಾಶವಾಣಿ ಬೆಂಗಳೂರು
ಪ್ರದೇಶ ಸಮಾಚಾರ

25.03.2025 18.40 hrs

<><*<><>*><>

ಮುಖ್ಯಾಂಶಗಳು

- ಪರಿಷತ್ ಸಭಾಪತಿ ಸ್ಥಾನಕ್ಕೆ ರಾಜೀನಾಮೆ ಇಲ್ಲ ; ಬಸವರಾಜ ಹೊರಟ್ಟಿ
- ಹನಿಟ್ರ್ಯಾಪ್ ಪ್ರಕರಣ ; ಸಚಿವ ರಾಜಣ್ಣ ದೂರು ನೀಡಿದರೆ ತನಿಖೆ ಸಾಧ್ಯ - ಗೃಹ ಸಚಿವ ಡಾ. ಜಿ. ಪರಮೇಶ್ವರ್
- ಬೇಸಿಗೆಯಲ್ಲಿ ಕುಡಿಯುವ ನೀರಿನ ಪೂರೈಕೆಗೆ ಕ್ರಮಕೈಗೊಳ್ಳುವಂತೆ ಪಂಚಾಯತ್ ಅಭಿವೃದ್ಧಿ ಅಧಿಕಾರಿಗಳಿಗೆ ಸಚಿವ ಶರಣಪ್ರಕಾಶ್ ಪಾಟೀಲ್ ಸೂಚನೆ
- ರಾಜ್ಯದಲ್ಲಿ ಕೃತಕಬುದ್ಧಿಮತ್ತೆ ಮೂಲಕ ಕ್ಷಯರೋಗ ಪತ್ತೆಗೆ ಆರೋಗ್ಯ ಇಲಾಖೆ ನಿರ್ಧಾರ
- ಸಂಶೋಧನೆ ಕುರಿತು ಜವಹಾರ್‌ಲಾಲ್ ನೆಹರು ಆಧುನಿಕ ವಿಜ್ಞಾನ ಸಂಶೋಧನಾ ಕೇಂದ್ರ ಹಾಗೂ ಹುಬ್ಬಳ್ಳಿಯ ಕೆಎಲ್‌ಇ ತಾಂತ್ರಿಕ ವಿಶ್ವವಿದ್ಯಾಲಯಗಳ ನಡುವೆ ಒಪ್ಪಂದ

<><*<><>*><>

ವಿಧಾನಪರಿಷತ್ ಸಭಾಪತಿ ಸ್ಥಾನಕ್ಕೆ ರಾಜೀನಾಮೆ ನೀಡುವ ನಿರ್ಧಾರದಿಂದ ಬಸವರಾಜ ಹೊರಟ್ಟಿ ಹಿಂದೆ ಸರಿದಿದ್ದಾರೆ. ಹುಬ್ಬಳ್ಳಿಯಲ್ಲಿ ಇಂದು ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ರಾಜೀನಾಮೆ ಸುದ್ದಿ ಹರಿದಾಡಿದ ಬಳಿಕ ರಾಜ್ಯಪಾಲರು, ಸಚಿವರು ಸಾಹಿತಿಗಳು ದೂರವಾಣಿ ಮೂಲಕ ಮಾತನಾಡಿದ್ದಾರೆ. ಈ ಹಿನ್ನೆಲೆಯಲ್ಲಿ ರಾಜೀನಾಮೆ ನಿರ್ಧಾರ ಕೈ ಬಿಟ್ಟಿರುವುದಾಗಿ ತಿಳಿಸಿದ್ದಾರೆ.

<><*<><>*><>

ದೂರವಾಣಿ ಕದ್ದಾಲಿಕೆ ಕುರಿತ ದೂರು ಯಾರೂ ನೀಡಿಲ್ಲ ಎಂದು ಗೃಹ ಸಚಿವ ಡಾ.ಜಿ.ಪರಮೇಶ್ವರ್ ಸ್ಪಷ್ಟಪಡಿಸಿದ್ದಾರೆ. ಬೆಂಗಳೂರಿನಲ್ಲಿ ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ಪ್ರತಿಪಕ್ಷ ನಾಯಕ ಆರ್. ಅಶೋಕ ಆರೋಪ ಮಾಡಿದ್ದು, ಅವರು ದೂರು ಸಲ್ಲಿಸಿದರೆ ತನಿಖೆ ನಡೆಸಬಹುದು ಎಂದು ತಿಳಿಸಿದ್ದಾರೆ. ಸಚಿವ ರಾಜಣ್ಣ ಹನಿಟ್ರ್ಯಾಪ್ ದೂರು ನೀಡಿದರಷ್ಟೆ ತನಿಖೆ ನಡೆಸಲು ಸಾಧ್ಯ ಎಂದು ಹೇಳಿದ್ದಾರೆ. ಪ್ರಕರಣಕ್ಕೆ ಸಂಬಂಧಪಟ್ಟಂತೆ ಯಾವುದೇ ಒತ್ತಡಗಳಿಲ್ಲ. ತನಿಖೆಗೆ ಮುಖ್ಯಮಂತ್ರಿ ಸಿದ್ದರಾಮಯ್ಯ ಅವರು, ಸಹಮತ ವ್ಯಕ್ತಪಡಿಸಿದ್ದಾರೆ ಎಂದು ಹೇಳಿದ್ದಾರೆ. ಒಳಮೀಸಲಾತಿ ವಿಚಾರ ಕುರಿತಂತೆ ನ್ಯಾಯಮೂರ್ತಿ ನಾಗಮೋಹನ್ ದಾಸ್

ಅವರನ್ನೊಳಗೊಂಡ ಆಯೋಗ ಮಧ್ಯಂತರ ವರದಿ ನೀಡಿ, ನಿರ್ದಿಷ್ಟವಾದ ಸಲಹೆ ನೀಡಿದರೆ ಅದನ್ನು ಅನುಷ್ಠಾನಗೊಳಿಸಲು ಸಾಧ್ಯವಿದೆ ಎಂದು ಸ್ಪಷ್ಟಪಡಿಸಿದ್ದಾರೆ.

<><*<><>*><>

ಬೇಸಿಗೆ ಆರಂಭವಾಗಿರುವ ಹಿನ್ನೆಲೆಯಲ್ಲಿ ಗ್ರಾಮಗಳಲ್ಲಿ ಕುಡಿಯುವ ನೀರಿನ ಸಮಸ್ಯೆ ಎದುರಾಗದಂತೆ ಎಚ್ಚರಿಕೆ ವಹಿಸಬೇಕೆಂದು ವೈದ್ಯಕೀಯ ಶಿಕ್ಷಣ, ಕೌಶಲ್ಯಾಭಿವೃದ್ಧಿ, ಜೀವನೋಪಾಯ ಸಚಿವ ಡಾ. ಶರಣ್ ಪ್ರಕಾಶ್ ಪಾಟೀಲ್ ಪಂಚಾಯತ್ ಅಭಿವೃದ್ಧಿ ಅಧಿಕಾರಿಗಳಿಗೆ ಸೂಚನೆ ನೀಡಿದ್ದಾರೆ. ಸೇಡಂ ತಾಲೂಕು ಪಂಚಾಯತ್ ಸಭಾಂಗಣದಲ್ಲಿ ತಾಲೂಕು ಮಟ್ಟದ ಕಾರ್ಯಪಡೆ' ಸಭೆಯ ಅಧ್ಯಕ್ಷತೆ ವಹಿಸಿ ಮಾತನಾಡಿದ ಅವರು, ಪಂಚಾಯತ್ ಮಟ್ಟದಲ್ಲಿ ಪಿಡಿಓಗಳು ಬೋರ್‌ವೆಲ್ ಹಾಗೂ ಜಲ ಮೂಲಗಳನ್ನು ಪರೀಕ್ಷಿಸಿ ಕ್ರಮ ಕೈಗೊಂಡು ವರದಿ ಸಲ್ಲಿಸಬೇಕು. ನೀರಿನ ಹೆಚ್ಚು ಸಮಸ್ಯೆ ಇರುವ ಗ್ರಾಮಗಳಲ್ಲಿ ಶಾಶ್ವತ ಬೋರ್‌ವೆಲ್ ಕೊರೆಸಿ, ಜನರ ಅನುಕೂಲಕ್ಕೆ ತಕ್ಕಂತೆ ನೀರು ಪೂರೈಕೆ ಮಾಡಬೇಕು ಎಂದು ತಿಳಿಸಿದ್ದಾರೆ. ಪಿಡಿಓಗಳು ಗ್ರಾಮಗಳಿಗೆ ಭೇಟಿ ನೀಡಿ ಒಂದು ವಾರದಲ್ಲಿ ವರದಿ ಸಲ್ಲಿಸಬೇಕು ಎಂದು ಸೂಚಿಸಿದ್ದಾರೆ.

<><*<><>*><>

ಕ್ಷಯರೋಗದ ಬಗ್ಗೆ ಜಾಗೃತಿ ಹಾಗೂ ನಿರ್ಮೂಲನೆಗೊಳಿಸಲು ರಾಜ್ಯ ಸರ್ಕಾರ ಬದ್ಧವಾಗಿದೆ ಎಂದು ಆರೋಗ್ಯ ಸಚಿವ ದಿನೇಶ್ ಗುಂಡೂರಾವ್ ತಿಳಿಸಿದ್ದಾರೆ. ವಿಶ್ವ ಕ್ಷಯ ರೋಗ ದಿನದ ಹಿನ್ನೆಲೆಯಲ್ಲಿ ಬೆಂಗಳೂರಿನಲ್ಲಿ ನಡೆದ ರಾಷ್ಟ್ರೀಯ ಟಿಬಿ ನಿರ್ಮೂಲನೆ ಕಾರ್ಯಕ್ರಮದಲ್ಲಿ ಮಾತನಾಡಿದ ಅವರು, ಕರ್ನಾಟಕವು ರೋಗ ಪತ್ತೆ ಮತ್ತು ಚಿಕಿತ್ಸೆಯಲ್ಲಿ ಪ್ರಮುಖ ಹಂತವನ್ನು ತಲುಪಿದೆ ಎಂದು ಹೇಳಿದ್ದಾರೆ. ಕೃತಕಬುದ್ಧಿಮತ್ತೆ ಆಧಾರಿತ ಟಿಬಿ ಪತ್ತೆ ಮತ್ತು ಮೊಬೈಲ್ ತಪಾಸಣಾ ಘಟಕಗಳ ನಿಯೋಜನೆ, ರಾಜ್ಯಾದ್ಯಂತ ಉಚಿತ ತಪಾಸಣೆ ಮತ್ತು ಚಿಕಿತ್ಸಾ ವ್ಯವಸ್ಥೆಯನ್ನು ಅನುಷ್ಠಾನಗೊಳಿಸಲಾಗಿದೆ ಎಂದು ಮಾಹಿತಿ ನೀಡಿದ್ದಾರೆ. ವಯಸ್ಕರ ಬಿಸಿಜಿ ಲಸಿಕಾ ಕಾರ್ಯಕ್ರಮದ ಮೂಲಕ ರಾಜ್ಯವನ್ನು ಕ್ಷಯಮುಕ್ತವನ್ನಾಗಿಸಲು ಪಣತೊಡುವಂತೆ ದಿನೇಶ್ ಗುಂಡೂರಾವ್ ಕರೆ ನೀಡಿದ್ದಾರೆ.

<><*<><>*><>

ಮಾನವನ ಬದುಕಿನಲ್ಲಿ ವಿಜ್ಞಾನ ಮತ್ತು ತಂತ್ರಜ್ಞಾನ ಇಲ್ಲದೆ ಊಹಿಸಿಕೊಳ್ಳುವುದು ಕಷ್ಟಸಾಧ್ಯ ಎಂದು ಕೊಡಗು ಜಿಲ್ಲಾ ಉಸ್ತುವಾರಿ ಹಾಗೂ ವಿಜ್ಞಾನ ಮತ್ತು ತಂತ್ರಜ್ಞಾನ ಸಚಿವ ಎನ್.ಎಸ್.ಭೋಸರಾಜು ತಿಳಿಸಿದ್ದಾರೆ. ಕೊಡಗು ವಿಶ್ವವಿದ್ಯಾನಿಲಯ, ಕರ್ನಾಟಕ ವಿಜ್ಞಾನ ಮತ್ತು ತಂತ್ರಜ್ಞಾನ ಅಕಾಡೆಮಿ, ಸಹಯೋಗದಲ್ಲಿ ನಡೆದ ೫ನೇ ವಿಜ್ಞಾನ ಮತ್ತು ತಂತ್ರಜ್ಞಾನ

ಸಮ್ಮೇಳನಕ್ಕೆ ಚಾಲನೆ ನೀಡಿ ಮಾತನಾಡಿದ ಅವರು, ವಿಜ್ಞಾನ ಮತ್ತು ತಂತ್ರಜ್ಞಾನದ ಬಗ್ಗೆ ವಿದ್ಯಾರ್ಥಿಗಳಲ್ಲಿ ಹೆಚ್ಚಿನ ಆಸಕ್ತಿ ಮತ್ತು ಕುತೂಹಲ ಇರಬೇಕು. ಇದರಿಂದ ವೈಜ್ಞಾನಿಕವಾಗಿ ಸಂಶೋಧನೆಗಳನ್ನು ಕೈಗೊಳ್ಳಲು ಸಾಧ್ಯವಾಗಲಿದೆ ಎಂದು ಅಭಿಪ್ರಾಯಪಟ್ಟಿದ್ದಾರೆ.

<><*<><>*><>

ಅಂತಾರಾಷ್ಟ್ರೀಯ ಮಟ್ಟದಲ್ಲಿ ಸಂಶೋಧನಾ ಪ್ರಗತಿಗೆ ಕೊಡುಗೆ ನಿಡುವ ನಿಟ್ಟಿನಲ್ಲಿ ಹುಬ್ಬಳ್ಳಿಯ ಕೆಎಲ್‌ಇ ತಾಂತ್ರಿಕ ವಿಶ್ವವಿದ್ಯಾಲಯ ಹಾಗೂ ಭಾರತ ಸರ್ಕಾರದ ವಿಜ್ಞಾನ ಮತ್ತು ತಂತ್ರಜ್ಞಾನ ಇಲಾಖೆಯ ಜವಾಹರಲಾಲ್ ನೆಹರು ಆಧುನಿಕ ವಿಜ್ಞಾನ ಸಂಶೋಧನಾ ಕೇಂದ್ರ ಇಂದು ಮಹತ್ವದ ಒಪ್ಪಂದಕ್ಕೆ ಸಹಿ ಹಾಕಿವೆ. ಜವಾಹರಲಾಲ್ ನೆಹರು ಸುಧಾರಿತ ವಿಜ್ಞಾನ ಸಂಶೋಧನಾ ಕೇಂದ್ರದ ನಿರ್ದೇಶಕರಾದ ಜೆ. ಯು. ಕುಲಕರ್ಣಿ ಒಡಂಬಡಿಕೆಗೆ ಸಹಿ ಹಾಕಿದರು. ಬಳಿಕ ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ಈ ಸಹಯೋಗವು ಸಂಶೋಧನಾ ಸಾಮರ್ಥ್ಯವನ್ನು ವಿಸ್ತರಿಸುವುದು, ವಿದ್ಯಾರ್ಥಿಗಳಿಗೆ ಮತ್ತು ಅಧ್ಯಾಪಕರಿಗೆ ಜಾಗತಿಕ ಅನುಭವ ನೀಡಲು ಸಹಕಾರಿಯಾಗಲಿದೆ ಎಂದು ತಿಳಿಸಿದರು. ಸಂಸ್ಥೆಯು ಈಗಾಗಲೇ, ಕೃಷಿ ಹಾಗೂ ಆರೋಗ್ಯ ಕ್ಷೇತ್ರದಲ್ಲಿ ಗಣನೀಯ ಸಾಧನೆ ಮಾಡಿದ್ದು, ಕೃಷಿ ಭೂಮಿಗಳಲ್ಲಿ ನ್ಯಾನೋತಂತ್ರಜ್ಞಾನ ಕೀಟನಾಶಕಗಳನ್ನು ಕಂಡುಹಿಡಿಯುವ ಯಂತ್ರವನ್ನು ತಯಾರಿಸಿ, ಸುಮಾರು ೧೨ ಸಾವಿರ ಹೆಕ್ಟೇರ್ ಭೂಮಿಯಲ್ಲಿ ಅಳವಡಿಸಲಾಗಿದೆ. ಇದು ಸಂಶೋಧನಾ ಸಂಸ್ಥೆಯ ಮಹತ್ವದ ಸಾಧನೆಯಾಗಿದೆ ಎಂದು ಹೇಳಿದರು.

ಧ್ವನಿ : ಜವಾಹರಲಾಲ್ ನೆಹರು ಸೆಂಟರ್ ಫಾರ್ ಅಡ್ವಾನ್ಸ್ಡ್ ಸೈಂಟಿಫಿಕ್ ರಿಸರ್ಚ್ ಕೇಂದ್ರದ ನಿರ್ದೇಶಕರು ಜಿ. ಯು. ಕುಲಕರ್ಣಿ (೩೦ ಸೆಕೆಂಡ್‌ಗಳು)

<><*<><>*><>

ಬಾಬಾಸಾಹೇಬ್ ಡಾ.ಅಂಬೇಡ್ಕರ್ ಮತ್ತು ದೇಶದ ಸಂವಿಧಾನವನ್ನು ವಿರೋಧಿಸುವುದು ಕಾಂಗ್ರೆಸ್ಸಿನ ಡಿ.ಎನ್.ಎ ಎಂದು ಮಾಜಿ ಸಚಿವ ಮತ್ತು ವಿಧಾನಪರಿಷತ್ ಸದಸ್ಯ ಸಿ.ಟಿ.ರವಿ ಆರೋಪಿಸಿದ್ದಾರೆ. ಬೆಂಗಳೂರಿನಲ್ಲಿಂದು ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ಮತೀಯ ಆಧಾರಿತ ಶೇಕಡ ೪ರಷ್ಟು ಮೀಸಲಾತಿಯೇ ಸಂವಿಧಾನಕ್ಕೆ ವಿರುದ್ಧವಾದುದು ಎಂದು ಹೇಳಿದ್ದಾರೆ. ಉಪಮುಖ್ಯಮಂತ್ರಿ ಡಿ.ಕೆ. ಶಿವಕುಮಾರ್, ಡಿಎಂಕೆ ಜೊತೆಗಿನ ತಮ್ಮ ಸ್ನೇಹವನ್ನು ಬಳಸಿಕೊಂಡು ಮೇಕೆದಾಟು ಯೋಜನೆ ವಿಚಾರವಾಗಿ ಅನುಮತಿ ಪಡೆಯಬೇಕಿತ್ತು ಎಂದು ತಿಳಿಸಿದ್ದಾರೆ.

<><*<><>*><>

ಗುತ್ತಿಗೆ ಕಾಮಗಾರಿಗಳಲ್ಲಿ ಮುಸಲ್ಮಾನರಿಗೆ ಶೇಕಡ ೪ರಷ್ಟು ಮೀಸಲಾತಿಯನ್ನು ರಾಜ್ಯ ಸರ್ಕಾರ ಪ್ರಕಟಿಸಿರುವುದು ಸಂವಿಧಾನ ವಿರೋಧಿಯಾಗಿದೆ ಎಂದು ಬಿಜೆಪಿ ಹಿರಿಯ ನಾಯಕ ಮಾಜಿ ಮುಖ್ಯಮಂತ್ರಿ ಈಶ್ವರಪ್ಪ ತಿಳಿಸಿದ್ದಾರೆ. ಶಿವಮೊಗ್ಗದಲ್ಲಿ ಮಾತನಾಡಿದ ಅವರು, ಇದು ಅಂಬೇಡ್ಕರ್ ಹಾಗೂ ಸಂವಿಧಾನಕ್ಕೂ ಮಾಡಿರುವ ಅನ್ಯಾಯ ಎಂದು ಹೇಳಿದ್ದಾರೆ. ಉಪಮುಖ್ಯಮಂತ್ರಿ ಡಿ.ಕೆ.ಶಿವಕುಮಾರ್ ಹೇಳಿಕೆ ಕೂಡ ಸಂವಿಧಾನ ವಿರೋಧಿ ಎಂದು ಅಭಿಪ್ರಾಯ ವ್ಯಕ್ತಪಡಿಸಿದ್ದಾರೆ.

<><*<><>*><>

ಸಂವಿಧಾನ ಬದಲಾಯಿಸುವುದಾಗಿ ಹೇಳಿಕೆ ನೀಡಿರುವ ಉಪಮುಖ್ಯಮಂತ್ರಿ ಡಿ.ಕೆ.ಶಿವಕುಮಾರ್ ವಿರುದ್ಧ ಬಿಜೆಪಿ ಕಾರ್ಯಕರ್ತರು ಶಿವಮೊಗ್ಗ ನಗರದ ಶಿವಪ್ಪ ನಾಯಕ ಪ್ರತಿಮೆಯ ಬಳಿ ಪ್ರತಿಭಟನೆ ನಡೆಸಿದರು. ಉಪ ಮುಖ್ಯಮಂತ್ರಿ ಡಿ. ಕೆ. ಶಿವಕುಮಾರ್ ಹೇಳಿಕೆ ಖಂಡಿಸಿ ಬೆಳಗಾವಿ ನಗರ ಸೇರಿದಂತೆ, ಬೆಳಗಾವಿ ಗ್ರಾಮೀಣ, ಚಿಕ್ಕೋಡಿ, ಖಾನಾಪುರ, ಬೈಲಹೊಂಗಲ ಸೇರಿದಂತೆ ಹಲವೆಡೆ ಇಂದು  ಬಿಜೆಪಿ ಕಾರ್ಯಕರ್ತರು ಪ್ರತಿಭಟನೆ ನಡೆಸಿದರು. ತುಮಕೂರಿನ ಬಿಜಿಎಸ್ ವೃತ್ತದಲ್ಲಿ ಜಿಲ್ಲಾ ಬಿಜೆಪಿ ನೇತೃತ್ವದಲ್ಲಿ ನಡೆದ ಪ್ರತಿಭಟನೆಯಲ್ಲಿ ಉಪಮುಖ್ಯಮಂತ್ರಿ ಡಿ.ಕೆ. ಶಿವಕುಮಾರ್ ವಿರುದ್ಧ ಆಕ್ರೋಶ ವ್ಯಕ್ತಪಡಿಸಿದ್ದಾರೆ.

<><*<><>*><>

ಮುದ್ದಂಡ ಕಪ್ ಕೊಡವ ಹಾಕಿ ಉತ್ಸವದ ಕ್ರೀಡಾಜ್ಯೋತಿಯನ್ನು ಕೊಡವ ಹಾಕಿ ಹಬ್ಬದ ಜನಕರಾದ ಕರಡ ಗ್ರಾಮದ ಪಾಂಡಂಡ ಕುಟುಂಬದ ಐನ್ ಮನೆಯಲ್ಲಿ ಇಂದು ಉದ್ಘಾಟಿಸಲಾಯಿತು. ಮುದ್ದಂಡ ಕಪ್ ಹಾಕಿ ಉತ್ಸವ ಸಮಿತಿ ಮತ್ತು ಕೊಡವ ಹಾಕಿ ಅಕಾಡೆಮಿಯ ಸಂಯುಕ್ತ ಆಶ್ರಯದಲ್ಲಿ ನಡೆದ ಕಾರ್ಯಕ್ರಮದಲ್ಲಿ ವಿರಾಜಪೇಟೆ ಕ್ಷೇತ್ರದ ಶಾಸಕ ಎ.ಎಸ್.ಪೊನ್ನಣ್ಣ ಕ್ರೀಡಾಜ್ಯೋತಿ ಉದ್ಘಾಟಿಸಿದರು.

<><*<><>*><>

ಆರ್ಥಿಕವಾಗಿ ಹಿಂದುಳಿದ ಬ್ರಾಹ್ಮಣ ಸಮುದಾಯದ ೩ ಸಾವಿರದ ೩೫೧ ವಿದ್ಯಾಥಿಗಳಿಗೆ ೫ ಕೋಟಿ ೧೭ ಲಕ್ಷ ವಿದ್ಯಾರ್ಥಿ ವೇತನ ಬಿಡುಗಡೆಗೊಳಿಸಿ ಡಿಬಿಟಿ ಮೂಲಕ ಪಾವತಿಸಲಾಗಿದೆ ಎಂದು ಕರ್ನಾಟಕ ರಾಜ್ಯ ಬ್ರಾಹ್ಮಣ ಅಭಿವೃದ್ಧಿ ಮಂಡಳಿಯ ಅಧ್ಯಕ್ಷ ಅಸಗೋಡು ಜಯಸಿಂಹ ತಿಳಿಸಿದ್ದಾರೆ.

<><*<> ಇಲ್ಲಿಗೆ ಪ್ರದೇಶ ಸಮಾಚಾರ ಮುಗಿಯಿತು <>*><>

<><*<> ನಮ್ಮ ಮುಂದಿನ ವಾರ್ತಾ ಪ್ರಸಾರ ರಾತ್ರಿ ೭.೩೫ ಕ್ಕೆ <>*><>